# ಶ್ರೀ ತ್ಯಾಗರಾಜ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್

ಆಡಳಿತ ಕಛೇರಿ: ನಂ.5, 9ನೇ ಅಡ್ಡರಸ್ತೆ, ಎನ್.ಆರ್.ಕಾಲೋನಿ, ಬೆಂಗಳೂರು-560 019.

ದೂರವಾಣಿ ಸಂಖ್ಯೆ.080-22958156/57


ನಂ.ಎಸ್‌ಟಿಸಿಬಿ/ಸಿಓ/ಆರ್.ಸಿ.1/2024-25 ದಿನಾಂಕ:15-05-2024

## ವಾಹನ ಚಾಲಕರ ನೇಮಕಾತಿಯ ಸಾಮಾನ್ಯ ಷರತ್ತುಗಳು ಹಾಗೂ ಅರ್ಜಿ ನಮೂನೆ

1. ಭರ್ತಿ ಮಾಡಿದ ನಿಗಧಿತ ಅರ್ಜಿಯ ಜೊತೆಯಲ್ಲಿ ಪತ್ರಾಂಕಿತ ಅಧಿಕಾರಿಯವರಿಂದ ದೃಢೀಕರಿಸಿರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿಯೊಂದಿಗೆ ಅಗತ್ಯವಿರುವ ಎಲ್ಲಾ ಪ್ರಮಾಣ ಪತ್ರಗಳನ್ನು ದ್ವಿಪ್ರತಿಗಳಲ್ಲಿ ಸಲ್ಲಿಸುವುದು.
2. ಅಭ್ಯರ್ಥಿಗಳ ಆಯ್ಕೆ ವಿಧಾನವು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಮತ್ತು ನಿಯಮ 1960 ಹಾಗೂ ಸಹಕಾರ ಸಂಘಗಳ ನಿಬಂಧಕರು ಹೊರಡಿಸಿರುವ ಸುತ್ತೋಲೆ/ನಿರ್ದೇಶನದ ಪ್ರಕಾರ ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಮೌಖಿಕ ಸಂದರ್ಶನ ಒಳಗೊಂಡಿರುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಮೌಖಿಕ ಪರೀಕ್ಷೆಗೆ ಮುನ್ನ ನಿರ್ದಿಷ್ಟಪಡಿಸಿದ ವಾಹನ ಚಾಲನೆ ತರಬೇತಿ ಶಾಲೆಯಿಂದ (ಡ್ರೈವಿಂಗ್ ಸ್ಕೂಲ್) ಚಾಲನೆ ಪ್ರತಿಭೆಯ ಬಗ್ಗೆ ಕಡ್ಡಾಯವಾಗಿ ಪರೀಕ್ಷಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಕನಿಷ್ಠ 5 ವರ್ಷಗಳ ಕಾಲ ಬ್ಯಾಂಕಿನಲ್ಲಿ ಸೇವೆ ಸಲ್ಲಿಸಲು ಕರಾರು ಮಾಡಿಕೊಡಬೇಕು.
3. ಆಯ್ಕೆಯಾದ ಅಭ್ಯರ್ಥಿಗಳು 2 ವರ್ಷದ ಅವಧಿಗೆ ಅರ್ಹತಾ ಪರೀಕ್ಷಾರ್ಥ (ಪ್ರೊಬೆಷನರಿ) ಸೇವೆಯಲ್ಲಿರಬೇಕು. ಈ ಅವಧಿಯಲ್ಲಿ ಸೇವೆಯು ತೃಪ್ತಿಕರವಾಗಿಲ್ಲದಿದ್ದಲ್ಲಿ ನಿರ್ದೇಶಕ ಮಂಡಳಿಯು ಅಂತಹ ಅಭ್ಯರ್ಥಿಗಳನ್ನು ಸೇವೆಯಿಂದ ತೆಗೆದುಹಾಕಲು ಅಧಿಕಾರ ಹೊಂದಿದೆ.
4. ತಪ್ಪು ಅಥವಾ ಅಪೂರ್ಣ ಮಾಹಿತಿ ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವ ಅಧಿಕಾರ ನಿರ್ದೇಶಕ ಮಂಡಳಿ ಹೊಂದಿರುತ್ತದೆ.
5. ಆಯ್ಕೆಯಾದ ಅಭ್ಯರ್ಥಿಗಳು ಬ್ಯಾಂಕಿನ ಸೇವಾ ನಿಯಮಗಳಿಗೆ ಬದ್ಧರಾಗಿ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ ಮತ್ತು ಸಹಕಾರ ಸಂಘಗಳ ಕಾಯ್ದೆ ಮತ್ತು ನಿಯಮಗಳಿಗೆ ಬದ್ಧರಾಗಿರತಕ್ಕದ್ದು.
6. ವಯೋಮಿತಿಗೆ ಸಂಬಂಧಪಟ್ಟಂತೆ, ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
7. ಅರ್ಜಿ ಸಲ್ಲಿಸುವಾಗ ಲಕೋಟೆಯ ಮೇಲೆ --------ಹುದ್ದೆಗಾಗಿ ಅರ್ಜಿ ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
8. ಆಯ್ಕೆಯಾದ ಅಭ್ಯರ್ಥಿಗಳು ನಿಯಮಗಳ ರೀತ್ಯಾ ನಗದು ಭದ್ರತೆ ಮತ್ತು ಗ್ಯಾರಂಟಿ ಬಾಂಡ್‌ಗಳನ್ನು ನೀಡಬೇಕಾಗುತ್ತದೆ.
9. ಒಮ್ಮೆ ಪಾವತಿ ಮಾಡಿದ ಅರ್ಜಿಶುಲ್ಕವನ್ನು ಮರುಪಾವತಿಸುವುದಿಲ್ಲ.
10. ಕಾನೂನು ಚೌಕಟ್ಟಿನಲ್ಲಿ ಅರ್ಜಿಗಳನ್ನು ತಿರಸ್ಕರಿಸುವ ಅಧಿಕಾರ ಬ್ಯಾಂಕಿಗೆ ದತ್ತವಾಗಿರುತ್ತದೆ.
11. ಈ ನೇಮಕಾತಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಮತ್ತು ನೇಮಕಾತಿ ಹಕ್ಕನ್ನು ಬ್ಯಾಂಕಿನ ಆಡಳಿತ ಮಂಡಳಿ ಕಾಯ್ದಿರಿಸಿದೆ.

ಸಿಬ್ಬಂದಿ ನೇಮಕಾತಿ ಸಮಿತಿಯ ಆದೇಶದ ಮೇರೆಗೆ

ಸಹಿ/-

ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ)